# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 454(587) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 11.03.2025 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ. | ರಾಜ್ಯದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವ್ಯಾಪ್ತಿಯ ಕೆ.ಐ.ಎ.ಡಿ.ಬಿ ವತಿಯಿಂದ ಎಷ್ಟು ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸಲಾಗಿದೆ; | ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ರಾಜ್ಯಾದ್ಯಂತ ಒಟ್ಟು 215 ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಪಡಿಸಲಾಗಿದೆ / ಅಭಿವೃದ್ಧಿ ಪಡಿಸಲಾಗುತ್ತಿರುತ್ತದೆ. |
| ಆ. | ಸದರಿ ಕೈಗಾರಿಕಾ ಪ್ರದೇಶಗಳು ಎಷ್ಟು ವಿಸ್ತೀರ್ಣ ಇಲಾಖೆಯ ಸುಪರ್ಧಿಯಲ್ಲಿದೆ ಮತ್ತು ಸುಪರ್ಧಿಯಲ್ಲಿರುವ ಜಾಗಗಳಲ್ಲಿ ಕೈಗಾರಿಕಾ ಪ್ರದೇಶಗಳನ್ನು ಸಂಪೂರ್ಣವಾಗಿ ಸ್ಥಾಪಿಸಲಾಗಿದೆಯೇ; ಇಲ್ಲವಾದಲ್ಲಿ, ಬೇರೆ ಯಾವ ಉದ್ದೇಶಕ್ಕೆ ಈ ಜಾಗವನ್ನು ಉಪಯೋಗಿಸಲಾಗಿದೆ; | ಮಂಡಳಿಯು ಅಭಿವೃದ್ಧಿಪಡಿಸಿರುವ ಕೈಗಾರಿಕಾ ಪ್ರದೇಶಗಳಲ್ಲಿ ಕೈಗಾರಿಕಾ ಚಟುವಟಿಕೆಗಳು ಮತ್ತು ಕೈಗಾರಿಕೆಗೆ ಪೂರಕವಾದ ಚಟುವಟಿಕೆಗಳಿಗೆ ಜಮೀನು ಹಂಚಿಕೆ ಮಾಡಿ ಬಳಕೆ ಮಾಡಲಾಗುತ್ತಿದೆ. |
| ಇ. | ರಾಜ್ಯದ ಎಲ್ಲಾ ಜಿಲ್ಲೆಗಳ ಕೈಗಾರಿಕಾ ಪ್ರದೇಶಗಳಲ್ಲಿ ಯಾವ ಯಾವ ವರ್ಗಗಳ ಜನರಿಗೆ ಸದರಿ ಜಾಗವನ್ನು ಹಂಚಿಕೆ ಮಾಡಲಾಗಿದೆ; ಅದರಲ್ಲಿ, ಮಹಿಳೆಯರಿಗೆ, ಸಣ್ಣ ಕೈಗಾರಿಕಾ ಸಂಸ್ಥೆಗಳಿಗೆ ಎಸ್.ಸಿ/ಎಸ್.ಟಿ. ಇನ್ನಿತರೆ ವರ್ಗದವರಿಗೆ ಹಂಚಿಕೆ ಮಾಡಲಾಗಿದೆಯೇ; | ಮಂಡಳಿಯು ರಾಜ್ಯಾದ್ಯಂತ ಅಭಿವೃದ್ಧಿಪಡಿಸಿರುವ ಕೈಗಾರಿಕಾ ಪ್ರದೇಶಗಳಲ್ಲಿ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗ, ಹಿಂದುಳಿದ ವರ್ಗ, ಮಹಿಳಾ ಮತ್ತು ಇನ್ನಿತರೆ ವರ್ಗದ ಉದ್ದಿಮೆದಾರರುಗಳಿಗೆ ಜಮೀನು ಹಂಚಿಕೆ ಮಾಡಲಾಗಿರುತ್ತದೆ. |
| ಈ. | ಹಲವು ವರ್ಷಗಳಿಂದ ಹಂಚಿಕೆ ಮಾಡಲಾದ ಕೈಗಾರಿಕಾ ನಿವೇಶನಗಳ ಮೂಲ ಮಾಲೀಕರು ಈ ಜಾಗದಲ್ಲಿ ಕೈಗಾರಿಕಾ ಸ್ಥಾಪನೆ ಮಾಡಿದ್ದಾರೆಯೇ ಅಥವಾ ಸದರಿ ಜಾಗವನ್ನು ಇನ್ನಿತರೇ ಮಾಲೀಕರಿಗೆ ಬಾಡಿಗೆ/ಗುತ್ತಿಗೆ ರೂಪದಲ್ಲಿ ನೀಡಿ ಅಕ್ರಮ ವೆಸಗಿದ್ದಾರೆಯೇ; ಅಕ್ರಮ ವೆಸಗಿದ್ದಲ್ಲಿ, ಇವರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ; | ಮಂಡಳಿಯು ಎಲ್ಲಾ ನಿವೇಶನ ಹಂಚಿಕೆ ಪಡೆದ ಹಂಚಿಕೆದಾರರಿಗೆ ನೆರವೇರಿಸುವ ಗುತ್ತಿಗೆ ಮತ್ತು ಮಾರಾಟ ಕರಾರು ಪತ್ರದಲ್ಲಿ, ತಮ್ಮ ಉದ್ದೇಶಿತ ಯೋಜನೆಯನ್ನು ನಿಯಮಾನುಸಾರ ಅನುಷ್ಠಾನಗೊಳಿಸಬೇಕೆಂಬ ಷರತ್ತು ವಿಧಿಸಿರುತ್ತದೆ. |

| | | |
|---|---|---|
| | | ಗುತ್ತಿಗೆ ಮತ್ತು ಮಾರಾಟ ಕರಾರು ಪತ್ರದಲ್ಲಿ ಹಂಚಿಕೆದಾರರು ಯೋಜನೆ ಅನುಷ್ಠಾನಗೊಳಿಸಿದ ನಂತರ ನಿರ್ಮಿಸಿದ ಕಟ್ಟಡದ ಭಾಗಶಃ ವಿಸ್ತೀರ್ಣವನ್ನು ಮಂಡಳಿಯ ಪೂರ್ವಾನುಮತಿ ಪಡೆದು ಉಪ ಗುತ್ತಿಗೆಗೆ ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಅಲ್ಲದೇ, ಕೆಲವು ಚಟುವಟಿಕೆಗಳಾದ IT/ITeS Park, logistics & warehousing, cold storage ಹಾಗೂ ಇತರೆ ಉತ್ಪಾದನೆ ಅಲ್ಲದೇ ಇರುವ ಚಟುವಟಿಕೆಗಳು, ಅನುಮೋದಿತ ಚಟುವಟಿಕೆಗಳಿಗೆ ಬಾಡಿಗೆ / ಗುತ್ತಿಗೆ ನೀಡಲು ಅವಕಾಶವಿರುತ್ತದೆ. |
| ಉ. | ಹಲವು ವರ್ಷಗಳಿಂದ ಕೈಗಾರಿಕಾ ಪ್ರದೇಶವನ್ನು ಸ್ಥಾಪಿಸುವ ಸಮಯದಲ್ಲಿ ಭೂಸ್ವಾಧೀನ ಪಡಿಸಿಕೊಳ್ಳುವ ರೈತರ ಜಮೀನಿಗೆ ಎಷ್ಟು ಬೆಲೆಯನ್ನು ನಿಗಧಿಪಡಿಸಿ ಪರಿಹಾರ ರೂಪದಲ್ಲಿ ನೀಡಲಾಗುತ್ತಿದೆ. ಹಾಗೂ ಭೂಸ್ವಾಧೀನಪಡಿಸಿಕೊಂಡಿರುವ ಜಮೀನನ್ನು ಕೈಗಾರಿಕೆಗಳಿಗೆ ಯಾವ ಬೆಲೆಯಲ್ಲಿ ನೀಡಲಾಗುತ್ತಿದೆ. ಪ್ರತಿ ವರ್ಷ ಸದರಿ ನಿವೇಶನಗಳಿಗೆ ಬೆಲೆ ಪರಿಷ್ಕರಣೆ ಮಾಡಲಾಗುತ್ತಿದೆಯೇ; ಮಾಡಿದ್ದಲ್ಲಿ, ಎಷ್ಟು ಬೆಲೆ ಪರಿಷ್ಕರಣೆ ಮಾಡಲಾಗಿದೆ ಮತ್ತು ಅದಕ್ಕೆ ಕಾರಣಗಳು? | ಕೆಐಎಡಿ ಕಾಯ್ದೆ ಕಲಂ 28(4) ರಡಿ ಅಂತಿಮ ಅಧಿಸೂಚನೆ ಹೊರಡಿಸಿದ ನಂತರ ಭೂಪರಿಹಾರ ದರ ನಿಗದಿಪಡಿಸುವ ಸಲುವಾಗಿ ಸಂಬಂಧಪಟ್ಟ ಜಿಲ್ಲಾಧಿಕಾರಿ/ಮಂಡಳಿಯ ವಿಶೇಷ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಜರುಗುವ ಭೂದರ ನಿರ್ಧರಣಾ ಸಲಹಾ ಸಮಿತಿ ಸಭೆಯಲ್ಲಿ ಭೂಮಾಲೀಕರೊಂದಿಗೆ ಸಮಾಲೋಚಿಸಿ ಪ್ರಸ್ತಾವಿತ ಪ್ರದೇಶದಲ್ಲಿನ ಮಾರ್ಗಸೂಚಿ ದರ ಮತ್ತು ಪ್ರಾಥಮಿಕ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಹಿಂದಿನ 3 ವರ್ಷಗಳ ಮಾರಾಟದ ಅಂಕಿ-ಅಂಶಗಳನ್ನು ಪರಿಗಣಿಸಿ ಶಿಫಾರಸ್ಸು ಮಾಡುವ ದರಕ್ಕೆ ಮಂಡಳಿ ಸಭೆಯ ಅನುಮೋದನೆ ಪಡೆದು ನಿಯಮಾನುಸಾರ ಪರಿಹಾರ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| | | ಮುಂದುವರೆದು, ಮಂಡಳಿಯಲ್ಲಿ ಕೈಗಾರಿಕಾ ಪ್ರದೇಶಗಳ ವಿನ್ಯಾಸ ನಕ್ಷೆ ಅನುಮೋದನೆ ನೀಡುವಾಗ ಕೈಗಾರಿಕಾ ಪ್ರದೇಶದ ಅಭಿವೃದ್ಧಿಗೆ ತಗಲುವ ತಾತ್ಕಾಲಿಕ ವೆಚ್ಚವನ್ನು (cost structure) ಅನುಮೋದನೆ ನೀಡಿ ನಿವೇಶನಗಳ ತಾತ್ಕಾಲಿಕ ಹಂಚಿಕೆ ದರ ನಿಗಧಿಪಡಿಸಲಾಗಿರುತ್ತದೆ.<br><br>ತದನಂತರ, ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಕಾರ್ಯ ಪೂರ್ಣಗೊಂಡ ನಂತರ ಕೈಗಾರಿಕಾ ಪ್ರದೇಶದ ಅಭಿವೃದ್ಧಿ ವೆಚ್ಚ, ಭೂಸ್ವಾಧೀನ ವೆಚ್ಚ ಮತ್ತು ಇತರೆ ವೆಚ್ಚಗಳನ್ನು ಪರಿಗಣಿಸಿ ಅಂತಿಮ ದರ ನಿಗಧಿಪಡಿಸಲಾಗುತ್ತದೆ. |

**ಸಂಖ್ಯೆ: ಸಿಐ 135 ಐಎಪಿ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು